# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

ಓದಲಾಗಿದೆ:- ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕನಿ/ವನಿಶಾ-2/ಸಿಆರ್-59/2015-16 ದಿ: 11/06/2015.

******

**ಪ್ರಸ್ತಾವನೆ:-**

ಮೇಲೆ ಓದಲಾದ ದಿ.11.06.2015ರ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಮೆಟ್ರಿಕ್ ನಂತರದ 869 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, 90765 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಬಯಸುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಪಡೆದು, ಪ್ರವರ್ಗ ಹಾಗೂ ಅಂಕಗಳ ಆಧಾರದ ಮೇಲೆ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ನೀಡಲಾಗುತ್ತಿದೆ. ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ನಿಯಮಾವಳಿಗಳನ್ನು ರೂಪಿಸಲಾಗಿರುತ್ತದೆ.

ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ ಸಾಮಾನ್ಯವಾಗಿ ಪ್ರತಿ ವರ್ಷ ಜೂನ್ 15ನೇ ತಾರೀಖು ಅರ್ಜಿಗಳನ್ನು ಆಹ್ವಾನಿಸಿ, ಜುಲೈ ಅಂತ್ಯದೊಳಗೆ ನಿಯಮಾನುಸಾರ ಸ್ಥಳೀಯ ಶಾಸಕರು ಅಧ್ಯಕ್ಷರಾಗಿರುವ ಸಮಿತಿಯ ಮೂಲಕ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ, ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ನೀಡಲಾಗುತ್ತಿದೆ. ನವೀಕರಣ ವಿದ್ಯಾರ್ಥಿಗಳಿಗೆ ಜೂನ್ ಮೊದಲನೇ ವಾರದಲ್ಲಿಯೇ ಪ್ರವೇಶ ನೀಡಲಾಗುತ್ತಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು ರಾಜ್ಯದಾದ್ಯಂತ ಸಾಕಷ್ಟು ಸಂಖ್ಯೆಯಲ್ಲಿ ಇಲ್ಲದಿರುವುದರಿಂದ, ಪ್ರವೇಶ ಬಯಸಿ ಅರ್ಜಿ ಸಲ್ಲಿಸುವ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ನೀಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಮಾಸಿಕ ರೂ.1500/- ರಂತೆ 10 ತಿಂಗಳ ಅವಧಿಗೆ ರೂ.15,000/-ಗಳನ್ನು ನೀಡುವ ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಕಾರ್ಯಕ್ರಮವನ್ನು ಜಾರಿಗೆ ತರಲಾಗಿರುತ್ತದೆ. ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಕಾರ್ಯಕ್ರಮದ ಸೌಲಭ್ಯ ನೀಡಲು ಪ್ರತ್ಯೇಕವಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ಮಂಜೂರಾತಿ ನೀಡಲಾಗುತ್ತಿದೆ. ಈ ಪ್ರಕ್ರಿಯೆಗೆ ಸುಮಾರು 3 ತಿಂಗಳು ಕಾಲಾವಕಾಶ ಬೇಕಾಗುತ್ತಿದ್ದು, ವಿದ್ಯಾರ್ಥಿನಿಲಯ ಸೌಲಭ್ಯ ದೊರಕದ ವಿದ್ಯಾರ್ಥಿಗಳಿಗೆ ತಕ್ಷಣಕ್ಕೆ ಮಂಜೂರಾತಿ ನೀಡಲು ವಿಳಂಬವಾಗುತ್ತಿದೆ.

ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕವೇ ನಡೆಸಿದಲ್ಲಿ, ನಿಗದಿತ ವೇಳೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವುದರ ಜೊತೆಗೆ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ವಿದ್ಯಾರ್ಥಿಗಳಿಗೆ ತಕ್ಷಣವೇ ವಿದ್ಯಾಸಿರಿ ಕಾರ್ಯಕ್ರಮದ ಸೌಲಭ್ಯ ನೀಡಲು ಸಾಧ್ಯವಾಗುತ್ತದೆ. ಇದರಿಂದಾಗಿ, ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಕ್ಕೆ ಬದಲಾಗಿ ಪರ್ಯಾಯ ವ್ಯವಸ್ಥೆ ಮಾಡಿಕೊಂಡು, ವಿದ್ಯಾಭ್ಯಾಸವನ್ನು ಮುಂದುವರೆಸಲು ಅನುಕೂಲವಾಗುವುದರಿಂದ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಪ್ರವೇಶ ಕೋರಲು ಹಾಗೂ ಸರ್ಕಾರಿ ಆದೇಶ ಸಂಖ್ಯೆ:ಸಕಇ 190 ಬಿಎಂಎಸ್ 2001, ದಿ.12.06.2001ರ ಅನುಬಂಧ-ಅ ಅರ್ಜಿಯ ಬದಲಾಗಿ ಆನ್‌ಲೈನ್ ಮೂಲಕ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನಿಸಲು ಅನುಮತಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

..2

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 636 ಬಿಎಂಎಸ್ 2015, ಬೆಂಗಳೂರು ದಿನಾಂಕ: 16-06-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕವೇ ನಡೆಸಿದಲ್ಲಿ, ನಿಗದಿತ ವೇಳೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವುದರ ಜೊತೆಗೆ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ವಿದ್ಯಾರ್ಥಿಗಳಿಗೆ ತಕ್ಷಣವೇ ವಿದ್ಯಾಸಿರಿ ಕಾರ್ಯಕ್ರಮದ ಸೌಲಭ್ಯ ನೀಡಲು ಸಾಧ್ಯವಾಗುವುರಿಂದ ಹಾಗೂ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಕ್ಕೆ ಬದಲಾಗಿ ಪರ್ಯಾಯ ವ್ಯವಸ್ಥೆ ಮಾಡಿಕೊಂಡು, ವಿದ್ಯಾಭ್ಯಾಸವನ್ನು ಮುಂದುವರೆಸಲು ಅನುಕೂಲವಾಗುವುದರಿಂದ ಹಿಂದುಳಿದ ವರ್ಗಗಳ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಪ್ರವೇಶ ನೀಡಲು ಮತ್ತು ಸರ್ಕಾರಿ ಆದೇಶ ಸಂಖ್ಯೆ:ಸಕಇ 190 ಬಿಎಂಎಸ್ 2001, ದಿ.12.06.2001ರ ಅನುಬಂಧ-ಅ ಅರ್ಜಿಯ ಬದಲಾಗಿ ಆನ್‌ಲೈನ್ ಮೂಲಕ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನಿಸಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
ಆರ್. ಭಾಸ್ಕರ್
(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
4. ಎಲ್ಲಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು
5. ಎಲ್ಲಾ ಜಿಲ್ಲೆಯ ಜಿಲ್ಲಾ ಖಜನಾಧಿಕಾರಿಗಳು,

   } ಆಯುಕ್ತರು, ಹಿಂ.ವ.ಕ.ಇ, ಬೆಂಗಳೂರು ಇವರ ಮುಖಾಂತರ (3-5)

6. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

-------